# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 544(631) |
| ಸದಸ್ಯರ ಹೆಸರು | : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 09.03.2026 |
| ಉತ್ತರಿಸುವವರು | : ಮಾನ್ಯ ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ಮತ್ತು 2025-26ನೇ ಸಾಲಿಗೆ ಸದರಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಲು ನೇಮಕವಾಗಿರುವವರ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಒಟ್ಟು 440 ಸರ್ಕಾರಿ ಪದವಿ ಕಾಲೇಜುಗಳಿವೆ. 2025-26ನೇ ಸಾಲಿಗೆ ಸದರಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಲು ನೇಮಕವಾಗಿರುವವರ ಸಂಖ್ಯೆ:8307. (ದಿನಾಂಕ:25.02.2026 ರಲ್ಲಿದ್ದಂತೆ) |
| (ಆ) | ಸದರಿ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸಲು ಆಯ್ಕೆಯಾಗಿರುವ ಹಲವಾರು ಅತಿಥಿ ಉಪನ್ಯಾಸಕರು ಸಲ್ಲಿಸಿರುವ ಪಿ.ಹೆಚ್.ಡಿ ಪ್ರಮಾಣ ಪತ್ರಗಳು ನಕಲಿ ಎಂಬ ದೂರುಗಳು ಕೇಳಿಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಇ) | ಬಂದಿದ್ದಲ್ಲಿ, ಸದರಿ ಪ್ರಮಾಣ ಪತ್ರಗಳ ನೈಜತೆ ಪತ್ತೆ ಹಚ್ಚಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ಹಾಗೂ ನಕಲಿ ಪಿಎಚ್‌ಡಿ ಪ್ರಮಾಣ ಪತ್ರಗಳನ್ನು ಸಲ್ಲಿಸಿ ಅತಿಥಿ ಉಪನ್ಯಾಸಕರ ಹುದ್ದೆಗೆ ಆಯ್ಕೆಯಾಗಿರುವ ವ್ಯಕ್ತಿಗಳ ವಿರುದ್ಧ ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | 2025-26ನೇ ಸಾಲಿನಲ್ಲಿ ನಡೆದ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಕಾಲೇಜು ಆಯ್ಕೆ ಮಾಡಿಕೊಂಡು, ಕರ್ತವ್ಯಕ್ಕೆ ಹಾಜರಾಗಿರುವ ಅತಿಥಿ ಉಪನ್ಯಾಸಕರ ಸ್ನಾತಕೋತ್ತರ ಪದವಿ ಅಂಕಪಟ್ಟಿಗಳು, ಎನ್ಇಟಿ, ಎಸ್‌ಎಲ್‌ಇಟಿ, ಕೆ-ಎಸ್‌ಇಟಿ, ಪಿ.ಹೆಚ್.ಡಿ, ಎಂ.ಫಿಲ್ ಅರ್ಹತಾ ಪ್ರಮಾಣ ಪತ್ರಗಳು ಹಾಗೂ ವಿಕಲಚೇತನ ಪ್ರಮಾಣ ಪತ್ರ ಮತ್ತು ಕಲ್ಯಾಣ ಕರ್ನಾಟಕ ಅರ್ಹತಾ ಪ್ರಮಾಣ ಪತ್ರ ಇವುಗಳ ನೈಜತೆ ವರದಿಗಳನ್ನು ಪಡೆಯಲು ಪ್ರಾಂಶುಪಾಲರು ಅನುಸರಿಸಬೇಕಾದ ಕ್ರಮಗಳ ಕುರಿತು ಅಧಿಕೃತ ಪರಿಶೀಲನಾ ಕಾರ್ಯವಿಧಾನವನ್ನು (Standard Operating Procedure) ಹೊರಡಿಸುವ ಮೂಲಕ ಸದರಿ ಪ್ರಮಾಣ ಪತ್ರಗಳ ನೈಜತೆ ಪತ್ತೆ ಹಚ್ಚಲು ಕ್ರಮ ಕೈಗೊಳ್ಳಲಾಗಿದೆ. ಅದರಂತೆ ಪಿಹೆಚ್.ಡಿ ಪ್ರಮಾಣ ಪತ್ರಗಳು ನಕಲಿ ಎಂದು ದೃಢಪಟ್ಟಂತಹ ಅತಿಥಿ ಉಪನ್ಯಾಸಕರನ್ನು ಕರ್ತವ್ಯದಿಂದ ಬಿಡುಗಡೆ ಮಾಡುವಂತೆ ಹಾಗೂ ಅಂತಹ ಅತಿಥಿ ಉಪನ್ಯಾಸಕರನ್ನು ಮುಂದಿನ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಲಾಗುವುದಿಲ್ಲ ಎಂಬುದಾಗಿ ತಿಳಿಸಲಾಗಿದೆ. |
| (ಈ) | ಯಾವ ಕಾಲಮಿತಿಯೊಳಗೆ, ಈ ರೀತಿ ನಕಲಿ ಪಿ.ಹೆಚ್.ಡಿ ಪ್ರಮಾಣಪತ್ರಗಳನ್ನು ಸಲ್ಲಿಸಿ ಅತಿಥಿ ಉಪನ್ಯಾಸಕರ ಹುದ್ದೆಗಳಗೆ ಅಕ್ರಮವಾಗಿ ಆಯ್ಕೆಯಾಗಿರುವವರ ವಿರುದ್ಧ ಕಠಿಣ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗುವುದು; | |

| | | |
|---|---|---|
| (ಉ) | ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಗುಣಮಟ್ಟ ಮತ್ತು ವಿಶ್ವಾಸಾರ್ಹತೆ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ, ನಕಲಿ ಪಿ.ಹೆಚ್.ಡಿ ಪ್ರಮಾಣ ಪತ್ರಗಳ ಹಾವಳಿಯನ್ನು ಶಾಶ್ವತವಾಗಿ ತಡೆಯಲು ಅತ್ಯಂತ ಕಠಿಣ ಕಾನೂನು ಕ್ರಮಗಳನ್ನು ಜರುಗಿಸುವ ಅವಶ್ಯಕತೆ ಇದ್ದು, ಈ ಕುರಿತು ಸರ್ಕಾರದ ಕ್ರಮಗಳೇನು? | ಸರ್ಕಾರದ ಆದೇಶ ಸಂಖ್ಯೆ:ಇಡಿ 16 ಇಜಿಒವಿ 2018, ದಿನಾಂಕ:31.05.2019ರಲ್ಲಿ ನಕಲಿ ಅಂಕಪಟ್ಟಿ ಮತ್ತು ಪ್ರಮಾಣ ಪತ್ರಗಳ ಹಾವಳಿ ತಪ್ಪಿಸಿ, ಪರೀಕ್ಷಾ ಪದ್ಧತಿಯಲ್ಲಿ ಪಾರದರ್ಶಕತೆ ಹೆಚ್ಚಿಸಲು ಆಧಾರ್ ಸಂಖ್ಯೆ ಆಧಾರಿತ ಡಿಜಿಟಲ್ (e-sign) ಅಂಕಪಟ್ಟಿ ಮತ್ತು ಪದವಿ ಪ್ರಮಾಣ ಪತ್ರಗಳನ್ನು ಆನ್‌ಲೈನ್ ಮೂಲಕ ವಿತರಿಸುವ ಯೋಜನೆ ಅನುಷ್ಠಾನಗೊಳಿಸಲಾಗಿದೆ.<br><br>ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ:ಇಡಿ 23 ಯುಎನ್ಇ 2021, ದಿನಾಂಕ:26.02.2021ರಲ್ಲಿ ಯಾವುದಾದರೂ ಸಂಸ್ಥೆಯು ಯಾವುದೇ ರೀತಿಯ/ಅನಧಿಕೃತ ಪದವಿ/ಗೌರವ ಡಾಕ್ಟರೇಟ್ ಪದವಿಗಳನ್ನು ಪ್ರಧಾನ ಮಾಡುತ್ತಿರುವುದು/ಪ್ರಧಾನ ಮಾಡಲಿರುವುದು, ಮಾರಾಟ ಮಾಡುತ್ತಿರುವುದು ಕಂಡುಬಂದರೆ, ಅದಕ್ಕೆ ಕಾರಣ ಕರ್ತರಾದ ವ್ಯಕ್ತಿ/ಸಂಸ್ಥೆಯ ವಿರುದ್ಧ ಕೂಡಲೇ ಪೊಲೀಸ್ ಠಾಣೆಯಲ್ಲಿ ಪ್ರಥಮ ವರ್ತಮಾನ ವರದಿ ದಾಖಲಿಸಿ ಅಗತ್ಯಕ್ರಮ ಕೈಗೊಳ್ಳುವಂತೆ ಆದೇಶಿಸಲಾಗಿದೆ. |

**ಸಂಖ್ಯೆ:ಇಡಿ 84 ಡಿಸಿಇ 2026(ಇ)**

(ಡಾ. ಎಂ.ಸಿ ಸುಧಾಕರ್)
ಉನ್ನತ ಶಿಕ್ಷಣ ಸಚಿವರು